ಇಂದು ದಿನಾಂಕ 04-08-2023 ರಂದು ಸಾಕ್ಷಿಯು ಹಾಜರಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ಎನ್ ಎಸ್ ಎಮ್ ವಕೀಲರಿಂದ:-**

ನಾನು ನನ್ನ ಮೌಖಿಕ ಸಾಕ್ಷ್ಯವನ್ನು ಶಪಥ ಪತ್ರದ ಮೂಲಕ ಸಲ್ಲಿಸಿದ್ದೇನೆ. ಸದರಿ ಶಪಥ ಪತ್ರದ ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ಅದಕ್ಕೆ ನಾನು ನನ್ನ ಸಹಿ ಮಾಡಿರುತ್ತೇನೆ. ಸದರಿ ಶಪಥ ಪತ್ರದ ಸಂಗತಿಗಳನ್ನು ನನ್ನ ಮೌಖಿಕ ಸಾಕ್ಷ್ಯವೆಂದು ಪರಿಗಣಿಸಲು ವಿನಂತಿ. ದಾವೆ ಸಂಬಂಧ ದಾಖಲಾತಿಗಳನ್ನು ಸಲ್ಲಿಸಿರುತ್ತೇನೆ ಅವುಗಳನ್ನು ಗುರುತಿಸಲು ಪ್ರಾರ್ಥಿಸುತ್ತೇನೆ.

1. ಖರೀದಿ ಪತ್ರದ ದೃಢೀಕೃತ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

2. ಇನ್ನೊಂದು ಖರೀದಿ ಪತ್ರದ ದೃಢೀಕೃತ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3. ಪಹಣಿ ಪತ್ರಿಕೆಯ ದೃಢೀಕೃತ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

4. ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ಮತ್ತು 5 ಎಂದು ಗುರುತಿಸಲಾಯಿತು.

5. ಹೇಳಿಕೆ ಪತ್ರದ ದೃಢೀಕೃತ ನಕಲು ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

6. ಪಂಚಾಯತಿ ರವರಿಗೆ ಅರ್ಜಿಯ ಸ್ವೀಕೃತಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

7. ನೋಟಿಸ್ ನ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-8 ರಿಂದ 16 ಎಂದು ಗುರುತಿಸಲಾಯಿತು.

8. ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-17 ರಿಂದ 25 ಎಂದು ಗುರುತಿಸಲಾಯಿತು.

ಆದ್ದರಿಂದ, ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಲು ಪ್ರಾರ್ಥನೆ.

**<u>ಪಾಟೀ ಸವಾಲು :-</u>** (ಶ್ರೀ.ಎಸ್ ವಿ ಯು ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲು ಮುಂದೂಡಲಾಯಿತು)

(ನನ್ನ ಉಕ್ತ ಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಗಣಕೀಕೃಗೊಳಿಸಲಾಯಿತು.

ಓ.ಹೆ.ಕೇ.ಸರಿ ಇದೆ

ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧೀಕಾರಿಗಳು, ಔರಾದ-ಬಿ.